ಓ.ಎಸ್.ನಂ.**60/2017**
ಪಿಡಬ್ಲ್ಯೂ .**3**

ಪ್ರಮಾಣ ವಚನ ಬೋಧಿಸಿದ ದಿನಾಂಕಃ **10.02.2025.**
ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋದಿಸಲಾಯಿತು.

**ಪಾಟೀ ಸವಾಲುಃ 2 ಮತ್ತು 3ನೇ ಪ್ರತಿವಾದಿಗಳ ಪರ ಶ್ರೀ ಎನ್.ಎಂ. ವಕೀಲರಿಂದ**

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರಕ್ಕೆ ನಾನೇ ಮಾಹಿತಿ ಕೊಟ್ಟಿದ್ದಾರೆ. ನನಗೆ ವಾದಿ ಮತ್ತು ಪ್ರತಿವಾದಿಯರು ಗೊತ್ತು. ಈ ಕೇಸನ್ನು ರಾಮಾಂಜಿನಪ್ಪನವರು ಹಾಕಿದ್ದಾರೆ, ಆದರೆ ಯಾರ ವಿರುದ್ದ ಹಾಕಿದ್ದಾರೆ ಎಂದು ಗೊತ್ತಿಲ್ಲ. ದಾವಾ ಆಸ್ತಿಯ ಸರ್ವೆ ನಂ.**125,** ಅದರಲ್ಲಿ **14** ಗುಂಟೆ ಇರುತ್ತದೆ. ದಾವಾ ಆಸ್ತಿಯ ಈಗಿನ ಕಂದಾಯ ದಾಖಲಾತಿಗಳು ಯಾರು ಹೆಸರಿನಲ್ಲಿ ಇವೆ ಎಂದರೆ ಗೊತ್ತಿಲ್ಲ. ಸಾಕ್ಷಿಯು ಮುಂದುವರೆದು **2**ನೇ ವಾದಿಯ ಹೆಸರಿನಲ್ಲಿ ಇರಬಹುದು ಎಂದು ಹೇಳುತ್ತಾರೆ. ದಾವಾ ಆಸ್ತಿಗೆ ಸಂಬಂಧಿಸಿದಂತೆ ಏನೆಲ್ಲಾ ಕ್ರಯದ ವ್ಯವಹಾರ ಆಗಿದೆ ಹಾಗೂ ಯಾರ ಹೆಸರಿಗೆ ಖಾತೆ ಬದಲಾವಣೆಯಾಗಿದೆ ಎಂದು ನಾನು ತಿಳಿದುಕೊಂಡಿಲ್ಲ. ದಾವಾ ಆಸ್ತಿಯ ಕಂದಾಯ ದಾಖಲೆಗಳು **2** ಮತ್ತು **3**ನೇ ಪ್ರತಿವಾದಿಗಳ ಹೆಸರಿನಲ್ಲಿ ಇವೆ ಎಂದರೆ ಸರಿಯಲ್ಲ. **2**ನೇ ವಾದಿ ಹಾಗೂ **2** ಮತ್ತು **3**ನೇ ಪ್ರತಿವಾದಿಯರ ನಡುವೆ ಏನೆಲ್ಲಾ ಪ್ರಕರಣಗಳು ನಡೆದಿವೆ ಹಾಗೂ ಸದರಿ ಪ್ರಕರಣಗಳಲ್ಲಿ ಏನು ತೀರ್ಮಾನವಾಗಿವೆ ಎಂದು ನಾನು ಕೇಳಿ ತಿಳಿದುಕೊಂಡಿಲ್ಲ. ದಾವಾ ಆಸ್ತಿಯ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲದೇ ಇದ್ದರೂ ಕೂಡ **2**ನೇ ಪ್ರತಿವಾದಿಯ ಮಾತು ಕೇಳಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇರುವುದಿಲ್ಲ**

(ನನ್ನ ಉಕ್ತಲೇಖಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ದೊಡ್ಡಬಳ್ಳಾಪುರ.